**ಕರ್ನಾಟಕ ಸರ್ಕಾರ**

ಸಂಖ್ಯೆ: DPAR 08 PHL 2023

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 09.11.2023.

**ಸುತ್ತೋಲೆ**

ವಿಷಯ: ದಿನಾಂಕ: 19.11.2023 ರಿಂದ 25.11.2023 ರವರೆಗೆ ರಾಜ್ಯಾದ್ಯಂತ "ರಾಷ್ಟ್ರೀಯ ಐಕ್ಯತಾ ಸಪ್ತಾಹ"ವನ್ನು ಆಚರಿಸುವ ಬಗ್ಗೆ.

*****

ಪ್ರತಿ ವರ್ಷದಂತೆ ಕೇಂದ್ರ ಸಕಾರದ ಸೂಚನೆಯನ್ವಯ, ರಾಜ್ಯದಾದ್ಯಂತ **ದಿನಾಂಕ: 19.11.2023 ರಿಂದ 25.11.2023** ರವರೆಗೆ "**ರಾಷ್ಟ್ರೀಯ ಐಕ್ಯತಾ ಸಪ್ತಾಹ**" ವನ್ನು ಆಚರಿಸಬೇಕೆಂದು ರಾಜ್ಯ ಸರ್ಕಾರವು ನಿರ್ಧರಿಸಿದೆ. ಅದರಂತೆ, ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಬಲಪಡಿಸಲು, ದೇಶದಲ್ಲಿ ಹಿಂಸಾಚಾರ ಮತ್ತು ಕೋಮು ದ್ವೇಷವನ್ನು ತಡೆಗಟ್ಟುವುದಕ್ಕಾಗಿ ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಕೋರಲಾಗಿದೆ. ಈ ಸಪ್ತಾಹದ ಅಂಗವಾಗಿ ವಾರವಿಡೀ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ದಿನಾಂಕ: **19.11.2023 ರ ಭಾನುವಾರ**ದಂದು, ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನವನ್ನು ಎಲ್ಲಾ ಸರ್ಕಾರದ ಕಛೇರಿಗಳಲ್ಲಿ ಸ್ವೀಕರಿಸಬೇಕಾಗಿ ತಿಳಿಸಿದೆ. (ಪ್ರಮಾಣ ವಚನದ ಪ್ರತಿ ಹಾಗೂ ಕಾರ್ಯಕ್ರಮದ ವಿವರಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದೆ).

ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಆಚರಿಸಿದ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜಕೀಯ), ನಂ. 349, 3ನೇ ಮಹಡಿ, 2ನೇ ಗೇಟ್, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇಲ್ಲಿಗೆ ಅನುಪಾಲನಾ ವರದಿಯೊಂದನ್ನು ಕಳುಹಿಸುವಂತೆ ತಿಳಿಸಲಾಗಿದೆ.

Mahesh

**(ಮಹೇಶ.ಆರ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ (ರಾಜಕೀಯ)

**ಇವರಿಗೆ :-**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
4. ಎಲ್ಲಾ ಜಿಲ್ಲಾಧಿಕಾರಿಗಳು/ಪೊಲೀಸ್ ಅಧೀಕ್ಷಕರುಗಳು.
5. ಘನತೆವೆತ್ತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು.
6. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

**ದಿನಾಂಕ: 19.11.2023 ರಿಂದ 25.11.2023 ರವರೆಗೆ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ವಿವರ**

| | |
|---|---|
| ದಿನಾಂಕ 19.11.2023 **ಭಾನುವಾರ** | **ರಾಷ್ಟ್ರೀಯ ಐಕ್ಯತಾ ದಿನ** ಅಹಿಂಸೆ, ಕೋಮು ಸೌಹಾರ್ದತೆ, ಜಾತ್ಯಾತೀತತೆ, ಈ ವಿಷಯಗಳ ಬಗ್ಗೆ ಸಭೆಗಳನ್ನು ಹಾಗೂ ವಿಚಾರ ಸಂಕಿರಣಗಳನ್ನು ಏರ್ಪಡಿಸುವುದು. |
| ದಿನಾಂಕ: 20.11.2023 **ಸೋಮವಾರ** | **ಅಲ್ಪಸಂಖ್ಯಾತರ ಕಲ್ಯಾಣ ದಿನ** ಅಲ್ಪಸಂಖ್ಯಾತರ ಅಭಿವೃದ್ದಿಗಾಗಿ ರೂಪಿಸಿರುವ 15 ಅಂಶಗಳ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಪ್ರಯತ್ನಿಸುವುದು ಮತ್ತು ಕೋಮು ಗಲಭೆ ಪೀಡಿತ ಪ್ರದೇಶಗಳಲ್ಲಿ ಭ್ರಾತೃತ್ವ ಭಾವನೆ ಬೆಳೆಸುವಂತೆ ಮೆರವಣಿಗೆಗಳನ್ನು ಏರ್ಪಡಿಸುವುದು. |
| ದಿನಾಂಕ: 21.11.2023 **ಮಂಗಳವಾರ** | **ಭಾಷಾ ಸೌಹಾರ್ದತಾ ದಿನ** ಭಾರತದ ಇತರ ಪ್ರದೇಶಗಳ ಭಾಷಾ ಪರಂಪರೆಯನ್ನು ಮತ್ತೊಂದು ಪ್ರದೇಶದ ಜನತೆಗೆ ತಿಳಿ ಹೇಳುವ ಸಲುವಾಗಿ ವಿಶೇಷ ಸಾಹಿತ್ಯಿಕ ಸಮಾರಂಭ ಮತ್ತು ಕವಿ ಸಮ್ಮೇಳನಗಳನ್ನು ಏರ್ಪಡಿಸುವುದು. |
| ದಿನಾಂಕ: 22.11.2023 **ಬುಧವಾರ** | **ದುರ್ಬಲ ವರ್ಗಗಳ ದಿನ** ಭೂಹೀನ ಕೃಷಿ ಕಾರ್ಮಿಕರಿಗೆ ಹೆಚ್ಚುವರಿ ಜಮೀನು ಮಂಜೂರಾತಿ ಕಾರ್ಯಕ್ರಮ ಸೇರಿದಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ದುರ್ಬಲಗ ವರ್ಗಗಳ ಅಭಿವೃದ್ಧಿಗೆ ಸರ್ಕಾರ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳನ್ನು ಎತ್ತಿ ತೋರಿಸುವಂತೆ ಸಭೆ ಮತ್ತು ಮೆರವಣಿಗೆಗಳನ್ನು ಏರ್ಪಡಿಸುವುದು. |
| ದಿನಾಂಕ: 23.11.2023 **ಗುರುವಾರ** | **ಸಾಂಸ್ಕೃತಿಕ ಏಕತಾ ದಿನ** ಭಾರತೀಯ ಪರಂಪರೆಯಾದ ವಿವಿಧತೆಯಲ್ಲಿ ಏಕತೆಯನ್ನು ಪ್ರತಿಬಿಂಬಿಸುವಂತಹ ಸಂಸ್ಕೃತಿ ಮತ್ತು ಐಕ್ಯತೆಯನ್ನು ಸಂರಕ್ಷಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು. |
| ದಿನಾಂಕ: 24.11.2023 **ಶುಕ್ರವಾರ** | **ಮಹಿಳಾ ದಿನ** ಭಾರತೀಯ ಸಮಾಜದಲ್ಲಿ ಮಹಿಳೆಯರ ಪ್ರಾಮುಖ್ಯತೆ ರಾಷ್ಟ್ರ ನಿರ್ಮಾಣ ಹಾಗೂ ಪ್ರಗತಿಯಲ್ಲಿ ಅವರ ಪಾತ್ರವನ್ನು ಎತ್ತಿ ತೋರಿಸುವಂತಹ ಕಾರ್ಯಕ್ರಮಗಳನ್ನು ಏರ್ಪಡಿಸುವುದು. |
| ದಿನಾಂಕ: 25.11.2023 **ಶನಿವಾರ** | **ಪರಿಸರ ರಕ್ಷಣಾ ದಿನ** ಜನ ಸಾಮಾನ್ಯರಿಗೆ ಪರಿಸರದ ಬಗ್ಗೆ ಹಾಗೂ ಅದನ್ನು ಉಳಿಸಿ ಬೆಳೆಸಲು ತಿಳುವಳಿಕೆ ಹೇಳುವ ಸಭೆ ಸಮಾರಂಭಗಳನ್ನು ಏರ್ಪಡಿಸುವುದು. |

# ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ

"ರಾಷ್ಟ್ರದ ಸ್ವಾತಂತ್ರ ಹಾಗೂ ಐಕ್ಯತೆಯನ್ನು ಸಂರಕ್ಷಿಸಲು ಮತ್ತು ಬಲಪಡಿಸಲು ಅರ್ಪಣಾ ಮನೋಭಾವದಿಂದ ಕೆಲಸ ಮಾಡುತ್ತೇನೆಂದು ನಾನು ಶ್ರದ್ಧಾಪೂರ್ವಕವಾಗಿ ಪ್ರಮಾಣ ಮಾಡುತ್ತೇನೆ."

"ಅಲ್ಲದೆ ನಾನು ಎಂದಿಗೂ ಹಿಂಸಾಚಾರದಲ್ಲಿ ತೊಡಗುವುದಿಲ್ಲವೆಂದು ಮತ್ತು ಮತ, ಭಾಷೆ, ಪ್ರದೇಶ ಅಥವಾ ಇತರ ರಾಜಕೀಯ ಅಥವಾ ಆರ್ಥಿಕ ಕುಂದು ಕೊರತೆಗಳ ಬಗೆಗಿನ ಭಿನ್ನಾಭಿಪ್ರಾಯಗಳನ್ನು ಮತ್ತು ವಿವಾದಗಳನ್ನು ಶಾಂತಿಯುತವಾಗಿ ಹಾಗೂ ಸಂವಿಧಾನಾತ್ಮಕ ರೀತಿಯಲ್ಲಿ ಬಗೆಹರಿಸಿಕೊಳ್ಳುವ ದಿಸೆಯಲ್ಲಿ ನನ್ನ ಪ್ರಯತ್ನವನ್ನು ಮುಂದುವರೆಸುತ್ತೇನೆಂದೂ ಪ್ರಮಾಣ ಮಾಡುತ್ತೇನೆ."